## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.

## ಸಿ.ಸಿ. ನಂ.1770/2023

ದಿನಾಂಕ : 17.01.2025

| | | |
|---|---|---|
| ಹೆಸರು | : ಅನಿತ | ಸಿಡಬ್ಲ್ಯು - 02 |
| ಗಂಡನ ಹೆಸರು | : ಸೋಮಶೇಖರ | ಪಿ ಡಬ್ಲ್ಯು - 03 |
| ವಯಸ್ಸು | : 35 ವರ್ಷ | |
| ಉದ್ಯೋಗ | : ವ್ಯವಸಾಯ | |
| ವಾಸಸ್ಥಳ | : ಮಲ್ಲೂರಹಳ್ಳಿ | ಪ್ರಮಾಣ ವಚನ ಬೋಧಿಸಲಾಯಿತು. |

### ಮುಖ್ಯ ವಿಚಾರಣೆ : ಮಾನ್ಯ ಎ.ಪಿ.ಪಿ. ರವರಿಂದ:

ಚಾಸಾ-1 ನನ್ನ ಗಂಡ. ಚಾಸಾ-3 ರಿಂದ 6 ನನಗೆ ಗೊತ್ತು. ನ್ಯಾಯಾಲಯದ ಮುಂದೆ ಇರುವ ಆರೋಪಿತ ನನಗೆ ಗೊತ್ತು.

ಆರೋಪಿಯು ಏನು ಮಾಡಿರುತ್ತಾನೆ ಎಂದು ನನಗೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಹೇಳಿಕೆಯನ್ನು ಪಡೆದಿರುವುದಿಲ್ಲ.

(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

### ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದ:

ದಿನಾಂಕ 15.04.2021 ರಂದು ಸಂಜೆ 07.00 ಗಂಟೆ ಸಮಯದಲ್ಲಿ ಚಾಸಾ-1 ರವರು ಗಿಡ್ಡಯ್ಯನ ಮನೆ ರಸ್ತೆಯಲ್ಲಿ ಬರುತ್ತಿದ್ದರು ಎಂದರೆ ನನಗೆ ಗೊತ್ತಿಲ್ಲ. ಆಗ ಆರೋಪಿ ನನ್ನ ಗಂಡನ ಎದುರುಗಡೆ ಬಂದು ನನ್ನ ಗಂಡನಿಗೆ ಬಾಯಿಗೆ ಬಂದಂತೆ ಬೈದಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ ಸ್ವಲ್ಪ ಸಮಯದ ನಂತರ ಚಾಸಾ-1 ರವರು ತನ್ನ ಅಣ್ಣನಾದ ರಾಜುರವರನ್ನು ಬೈಕ್ ನಲ್ಲಿ ಕೂರಿಸಿಕೊಂಡು ಹೋಗುತ್ತಿದ್ದು, ಬೈಕನ್ನು ನಿಲ್ಲಿಸಿ ಚಾಸಾ-3 ರವರ ಮನೆಯವರ ಮುಂದೆ ಹೋಗುತ್ತಿದ್ದರು ಎಂದರೆ ನನಗೆ ಗೊತ್ತಿಲ್ಲ. ಆಗ ಆರೋಪಿಯು ನನ್ನ ಗಂಡನನ್ನು ತಡೆದು ನಿಲ್ಲಸಿ ಸೂಳೆ ಮಗನೇ ಬೋಳಿ ಮಗನೇ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿಯು ಕೈಗಳಿಂದ ನನ್ನ ಗಂಡ ಕೆನ್ನೆಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ . ಆರೋಪಿಯು ಕಲ್ಲಿನಿಂದ ನನ್ನ ಗಂಡನ ಎದೆಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಆ

ಸಮಯದಲ್ಲಿ ಚಾಸಾ3 ರಿಂದ 5 ರವರು ಜಗಳ ಬಿಡಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಂತರ ನಾನು ನನ್ನ ಗಂಡನನ್ನು ಅಂಬ್ಯೂಲೆನ್ಸ್ ನಲ್ಲಿ ನಾಯಕನಹಟ್ಟಿ ಆಸ್ಪತ್ರೆಗೆ ಕರದುಕೊಂಡು ಹೋಗಿರುತ್ತೇನೆ ಎಂದರೆ ಸರಿಯಲ್ಲ.

ದಿಃ 15.04.2021 ರಂದು ಈಗ ಓದಿ ಹೇಳಿದಂತೆ ಪೊಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಕೆಯನ್ನು ನಿಪಿ.3 ಅಂತ ಗುರುತಿಸಲಾಯಿತು.

**ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ ಃ**

ಆರೊಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆ** ಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

C/c ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ.